ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ, ಯೋಜನಾ ಮತ್ತು ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರು).—

ಅ) ಯಾರೂ ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉಬ್ಬವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ರಾಷ್ಟ್ರೀಯ ಹೆದ್ದಾರಿಗಳನ್ನು ರಚಿಸುವುದು

೧೫೨೨. ಶ್ರೀ ಎ. ಬಿ. ದೇಸಾಯಿ (ಧಾರವಾಡ).— ಮಾನ್ಯ ನಗರಾಭಿವೃದ್ಧಿ ಹಾಗೂ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ನೂತನ ರಾಷ್ಟ್ರೀಯ ಹೆದ್ದಾರಿಗಳನ್ನು (ನ್ಯಾಷನಲ್ ಹೈ ವೇ) ರಚಿಸುವ ಎಷ್ಟು ಯೋಜನೆಗಳು ಸರ್ಕಾರದ ಮುಂದಿದೆಯೇ ?

ಆ) ಇವುಗಳ ಕಾಮಗಾರಿಗಳು ಸಂಪೂರ್ಣಗೊಳಿಸುವುದು ಯಾವಾಗ?

ಶ್ರೀ ಎಂ. ಚಂದ್ರಶೇಖರ್ (ನಗರಾಭಿವೃದ್ಧಿ ಮತ್ತು ಲೋಕೋಪಯೋಗಿ ಸಚಿವರು).—

ಅ) ರಾಜ್ಯದ ೧೧ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಸಲುವಾಗಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿದೆ.

ಆ) ಕೇಂದ್ರ ಸರ್ಕಾರವು ಈ ರಸ್ತೆಗಳನ್ನು ರಾಷ್ಟ್ರೀಯ ಹೆದಾರಿಗಳೆಂದು ಘೋಷಿಸಿದ ನಂತರ ಅಭಿವೃದ್ಧಿ ಕೆಲಸಗಳನ್ನು ತೆಗೆದುಕೊಳ್ಳಬೇಕಾಗುತ್ತದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಖಾಸಗಿ ಮಾಧ್ಯಮಿಕ ಶಾಲೆಗಳನ್ನು ತೆರೆಯುವುದು

೨೬೫೫. ಶ್ರೀ ಆರ್. ಎನ್. ನಾಯಕ್ (ಭಟ್ಕಳ).—ಮಾನ್ಯ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ೧೯೮೭-೮೮ನೇ ಸಾಲಿನಲ್ಲಿ ಮಾಧ್ಯಮಿಕ ಶಾಲೆಗಳನ್ನು ತೆರೆಯಲು ಅನುಮತಿಸಲಾಗಿರುವ ಖಾಸಗಿ ಸಂಸ್ಥೆಗಳೆಷ್ಟು ?

(ಭಾಷಾವಾರು ಶಾಲೆಗಳ ವಿವರ ನೀಡುವುದು)

ಆ) ಸದರಿ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಎಲ್ಲೆಲ್ಲಿ ಮಾಧ್ಯಮಿಕ ಶಾಲೆಗಳನ್ನು ತೆರೆಯಲು ಅನುಮತಿ ನೀಡಲಾಗಿರುವುದು ಎಷ್ಟು ? ಆ ಜಿಲ್ಲೆಯಿಂದ ಅನುಮತಿಗಾಗಿ ಸಲ್ಲಿಸಿದ ಅರ್ಜಿಗಳೆಷ್ಟು ? ಆ ಪೈಕಿ ನಿರಾಕರಿಸಿದ ಅರ್ಜಿಗಳೆಷ್ಟು ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು).—

ಅ) ೧. ಉರ್ದು ಶಾಲೆಗಳು — ೫

೨. ಆಂಗ್ಲ ಮಾಧ್ಯಮ ಶಾಲೆ — ೧

(೮೬-೮೭ನೇ ಸಾಲಿನಿಂದ ಪೂರ್ವಾನ್ವಯ) —

ಒಟ್ಟು ೬